# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ

## ಉತ್ತರ ಕನ್ನಡ : ಕಾರವಾರ

**ಎಸ್.ಸಿ. ನಂ.10/2019**

**ದೋ.ಸಾ. :56 ಪ್ರಾ.ಸಾ. : 54**

| | | |
|---|---|---|
| ಸಾಕ್ಷಿಯ ಹೆಸರು | : | ಶ್ರೀ ಮೊಹಮ್ಮದ್ ನಸರುಲ್ಲಾ |
| ತಂದೆಯ ಹೆಸರು | : | ಅಬ್ದುಲ್ ಘನಿ |
| ವಯಸ್ಸು | : | 66 ವರ್ಷ |
| ಕೆಲಸ | : | ನಿವೃತ್ತ ಉಪನಿರ್ದೇಶಕರು, ಗಣಿ ಮತ್ತು ಭೂವಿಜ್ಞಾನ ಇಲಾಖೆ |
| ವಾಸ | : | ಹುಬ್ಬಳ್ಳಿ |

**ದಿನಾಂಕಃ 22-12-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದ:-**

1. 2016 ರಿಂದ 2019 ರವರೆಗೆ ನಾನು ಕಾರವಾರದಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಉಪ ನಿರ್ದೇಶಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿ.14-12-2018 ರಂದು ಕಾರವಾರ ಸಿ.ಪಿ.ಐ ಕಚೇರಿಯಿಂದ ಒಂದು ಪತ್ರ ಬಂದಿದ್ದು, ಅದರಲ್ಲಿ ಬೆಂಗಳೂರಿನ ಎಂ.ಎಂ.ಸಿ.ಎಲ್., ಕಂಪನಿಯವರು ಕಾರವಾರದ ಅಲಿಗದ್ದಾ ಹಾಗೂ ಬೈತ್ಕೋಲ್ ಗಳಲ್ಲಿ ದಾಸ್ತಾನು ಮಾಡಿದ್ದ ಕಬ್ಬಿಣದ ಅದಿರುಗಳನ್ನು ನಾಶಪಡಿಸಿ ಕಾನೂನು ಉಲ್ಲಂಘನೆ ಮಾಡಿ, ಕಟ್ಟಡ ಕಾಮಗಾರಿ ನಡೆಸುವ ಸಂಬಂಧವಾಗಿ ಅಂಬೇಡ್ಕರ್ ಸೇನೆಯ ವತಿಯಿಂದ, ಪ್ರೇಮ್ ಕುಮಾರ್ ನಾಯರ್ ರವರಿಂದ ಏನಾದರೂ ದೂರು ಬಂದಿದೆಯಾ? ಹಾಗೂ ಬಂದಿದ್ದರೆ, ಆ ದೂರಿಗೆ ಏನು ಕ್ರಮ ಕೈಗೊಂಡಿರುತ್ತೀರಿ? ಎಂಬ ಬಗ್ಗೆ ಮಾಹಿತಿ ನೀಡುವಂತೆ ಕೋರಿರುತ್ತಾರೆ. ಸದರಿ ಪತ್ರ ಬಂದ ನಂತರ ನಾನು ನಮ್ಮ ಕಚೇರಿಯ ದಾಖಲೆಗಳನ್ನು ಪರಿಶೀಲಿಸಿದಾಗ, ಮೃತ ಪ್ರೇಮ್ ಕುಮಾರ್ ರವರು ಈ ಹಿಂದೆ ಎಂ.ಎಂ.ಸಿ.ಎಲ್., ಕಂಪನಿಯ ವಿರುದ್ಧ ದೂರು ನೀಡಿದ್ದು, ಅದಕ್ಕೆ ಸಂಬಂಧಿಸಿದಂತೆ ನಾವು ತನಿಖೆಯನ್ನು ಮಾಡಿರುವುದು ಕಂಡುಬಂದಿರುತ್ತದೆ. ಆನಂತರ ಸಿ.ಪಿ.ಐ ರವರು ಕೋರಿರುವ ಮಾಹಿತಿಗೆ ಪ್ರತಿಯಾಗಿ, ನಮ್ಮ ಕಚೇರಿಯ ದಾಖಲೆಗಳನ್ನು ಪರಿಶೀಲಿಸಿ, ದಿ.22-12-2018 ರಂದು ಉತ್ತರವನ್ನು ನೀಡಿರುತ್ತೇನೆ. ಕೋರಿಕೆ ಪತ್ರವನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಪಿ-131 ಎಂದು, ಸಾಕ್ಷಿಯು

ತಾನು ನೀಡಿದ ಪತ್ರವನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-132 ಎಂದು, ಸಾಕ್ಷಿಯ ಸಹಿಯನ್ನು ನಿಪಿ-132(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 1 ನೇ ಆರೋಪಿ ಪರ ಶ್ರೀ ಎ.ಎ.ಎ. ವಕೀಲರಿಂದಃ-**

2. ಪೊಲೀಸರು ನೀಡಿದ ಕೋರಿಕೆ ಪತ್ರಕ್ಕೆ ಪ್ರತಿಯಾಗಿ, ನಿಪಿ-132 ರಲ್ಲಿ ಉತ್ತರವನ್ನು ನೀಡಿದ್ದನ್ನು ಬಿಟ್ಟು, ಬೇರೆ ಯಾವುದೇ ದಾಖಲೆಯನ್ನು ನೀಡಿಲ್ಲ ಎಂದರೆ ಸರಿ. ಸದರಿ ಪತ್ರದೊಂದಿಗೆ ಯಾವುದೇ ದಾಖಲೆಯನ್ನು ಲಗತ್ತಿಸಲು ತೊಂದರೆ ಇತ್ತಾ? ಎಂದರೆ ಸಾಕ್ಷಿಯು ಸಿ.ಪಿ.ಐ. ರವರು ಯಾವುದೇ ದಾಖಲೆಯನ್ನು ನೀಡುವಂತೆ ಕೋರದ ಕಾರಣ, ನಾನು ಯಾವುದೇ ದಾಖಲೆಯನ್ನು ನೀಡಿಲ್ಲ ಎಂದು ನುಡಿಯುತ್ತಾರೆ. ನಮ್ಮ ಬಳಿ ಯಾವುದೇ ದಾಖಲೆಗಳು ಲಭ್ಯವಿಲ್ಲದ ಕಾರಣ, ನಾವು ಯಾವುದೇ ದಾಖಲೆಯನ್ನು ನೀಡಿಲ್ಲ ಎಂದರೆ ಸರಿಯಲ್ಲ. ಪೊಲೀಸರ ಕೋರಿಕೆಯ ಮೇರೆಗೆ ನಿಪಿ-132 ಪತ್ರವನ್ನು ಸೃಷ್ಟಿಸಿ ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ಮತ್ತು 3 ನೇ ಆರೋಪಿತರ ಪರ ಶ್ರೀ ಎಲ್.ಎಸ್.ಕೆ. ವಕೀಲರಿಂದಃ-**

ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 4 ನೇ ಆರೋಪಿ ಪರ ಶ್ರೀ ಎನ್.ವಿ.ಎನ್ ವಕೀಲರಿಂದಃ-**

ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಪಾಟೀ ಸವಾಲುಃ 5 ನೇ ಆರೋಪಿ ಪರ ಶ್ರೀ ಹೆಚ್.ಎಸ್.ಎಸ್.ವಕೀಲರಿಂದಃ-**

ಪಾಟೀ ಸವಾಲು ಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

Sd/-

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ